ದಿನಾಂಕ: 24.02.2021 ರಂದು ಬೆಳಗ್ಗೆ 11.00 ಗಂಟೆಗೆ ರಾಜಾಜಿನಗರ ವಾರ್ಡ್ ನಂ. 99 ರಲ್ಲಿ ಶ್ರೀ ಹೆಚ್.ವಿ. ಅಶ್ವತ್ಥ್, ನೋಡಲ್ ಅಧಿಕಾರಿ ರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡುವಳಿಗಳ ವಿವರ:-

**ಹಾಜರಿದ್ದ ಪಾಲಿಕೆಯ ಅಧಿಕಾರಿಗಳು ಹಾಗೂ ವಾರ್ಡ್ ಕಮಿಟಿ ಸದಸ್ಯರು:-**

1. ಶ್ರೀ ಹೆಚ್.ವಿ. ಅಶ್ವತ್ಥ, ನೋಡಲ್ ಅಧಿಕಾರಿಗಳು
2. ಶ್ರೀ ಸೋಮಶೇಖರ್.ಜಿ.ಎಲ್, ಸಹಾಯಕ ಅಭಿಯಂತರರು,
3. ಶ್ರೀಮತಿ ರೇಶ್ಮ, ಸಹಾಯಕ ಅಭಿಯಂತರರು, ಎಸ್.ಡಬ್ಲ್ಯೂ.ಡಿ.
4. ಶ್ರೀ ನಾಗರಾಜ್, ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ.
5. ಶ್ರೀ ಜಮೀಲ್, ಕಿರಿಯ ಅಭಿಯಂತರರು, ವಿದ್ಯುತ್ [ಪಶ್ಚಿಮ]
6. ಶ್ರೀ ಪರಶುರಾಂ, ಕಿರಿಯ ಅಭಿಯಂತರರು , ಬೆಸ್ಕಾಂ
7. ಶ್ರೀ ವಿಜಯ್, ಎ.ಎಸ್.ಐ. ರಾಜಾಜಿನಗರ
8. ಶ್ರೀ ಜಿ.ಸಿ. ಲೋಕೇಶ್, ಮೌಲ್ಯಮಾಪಕರು, ಕಂದಾಯ ಇಲಾಖೆ,
9. ಶ್ರೀ ಸಂತೋಷ್ ಕುಮಾರ್ ನಾಯಕ್, ಹಿರಿಯ ಆರೋಗ್ಯ ಪರಿವೀಕ್ಷಕರು
10. ಶ್ರೀ ಬಸವರಾಜು, ಆಹಾರ ನಿರೀಕ್ಷಕರು
11. ಶ್ರೀ ಪರಮೇಶ್, ವಿ.ಎ. ಉಪತಹಶೀಲ್ದಾರ್ ಕಛೇರಿ
12. ಶ್ರೀ ರಮೇಶ್, ಪಶು ಸಂಘೋಪನ ಇಲಾಖೆ,
13. ಶ್ರೀ ರಘು, ಕಿರಿಯ ಆರೋಗ್ಯ ಪರಿವೀಕ್ಷಕರು
15. ಶ್ರೀ ಶ್ರೀನಿವಾಸ್.ಎನ್. ಸದಸ್ಯರು
16. ಶ್ರೀ ಉಮೇಶ್, ಸದಸ್ಯರು,
17. ಶ್ರೀ ರಾಜಣ್ಣ, ಸದಸ್ಯರು
18. ಶ್ರೀ ಮಂಜುನಾಥ್, ಸದಸ್ಯರು

ದಿನಾಂಕ: 24.02.2021 ರಂದು ಬೆಳಗ್ಗೆ 11.00 ಗಂಟೆಗೆ ವಾರ್ಡ್ ನಂ. 99 ರಾಜಾಜಿನಗರದ ಡಾ: ಅಬ್ದುಲ್ ಕಲಾಂ, ಸಭಾಂಗಣದಲ್ಲಿ ಪಾಲಿಕೆ ಅಧಿಕಾರಿಗಳೊಂದಿಗೆ ಸಭೆಯನ್ನು ಕೈಗೊಂಡು ಈ ಕೆಳಗಿನ ವಿಷಯಗಳನ್ನು ಚರ್ಚಿಸಲಾಯಿತು.

1. ಹಿಂದಿನ ಸಭೆಯ ನಡವಳಿಯ ಪಟ್ಟಿಯನ್ನು ಸಭೆಗೆ ಮಂಡಿಸಲಾಯಿತು.
2. ಹಿಂದಿನ ಸಭೆಯಲ್ಲಿ ತೆಗೆದುಕೊಂಡ ನಡವಳಿಗಳ ಅನುಷ್ಠಾನದ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು.
3. ವಾರ್ಡ್ ಕಮಿಟಿ ಸದಸ್ಯರು ಮಾತನಾಡುತ್ತಾ, ಪಶ್ಚಿಮ ಕಾರ್ಡ್ ರಸ್ತೆಯ ಮೇಲ್ ಸೇತುವೆಯ ಪಕ್ಕದಲ್ಲಿ ಟ್ರಾನ್ಸ್ ಫಾರ್ಮರ್ ಸ್ಥಳಾಂತರಿಸಲು ಅಡ್ಡವಾಗಿ ಬರುವ ಮರವನ್ನು ತೆರವುಗೊಳಿಸಿದಲ್ಲಿ, ಟ್ರಾನ್ಸ್ ಫಾರ್ಮರ್ ಸ್ಥಳಾಂತರಿಸುವ ಕಾಮಗಾರಿಯನ್ನು ಮಾಡಲು ಅನುಕೂಲವಾಗುವುದೆಂದು ಸಭೆಯಲ್ಲಿ ಸರ್ವಾನುಮತದಿಂದ ತೀರ್ಮಾನ ತೆಗೆದುಕೊಳ್ಳಲಾಯಿತು.
4. ನೋಡಲ್ ಅಧಿಕಾರಿಗಳು ಮಾತನಾಡುತ್ತಾ, ಬೆಸ್ಕಾಂ ಇಲಾಖೆಗೆ ಸಂಬಂಧಿಸಿದ ಹಳೇಯ ವಿದ್ಯುತ್ ಕಂಬಳನ್ನು ತೆರವುಗೊಳಿಸಲು ಹಿಂದಿನ ಸಭೆಯಲ್ಲಿ ತಿಳಿಸಲಾಗಿದ್ದರು ಸಹ ಯಾವುದೇ ಕ್ರಮವನ್ನು ಕೈಗೊಂಡಿರುವುದಿಲ್ಲವೆಂದು ಸಭೆಗೆ ತಿಳಿಸಿದರು. ಇದಕ್ಕೆ ಉತ್ತರವಾಗಿ ಸಭೆಯಲ್ಲಿ ಹಾಜರಿದ್ದ ಶ್ರೀ ಪರಶುರಾಂ, ಕಿರಿಯ ಅಭಿಯಂತರರು, ಬೆಸ್ಕಾಂ ರವರು ಮುಂದಿನ ಸಭೆಗೆ ವಾರ್ಡ್ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಹಳೇಯ ಕಂಬಗಳನ್ನು ತೆರವುಗೊಳಿಸುವುದಾಗಿ ಸಭೆಗೆ ತಿಳಿಸಿದರು.
5. ಶ್ರೀ ಉಮೇಶ್, ವಾರ್ಡ್ ಕಮಿಟಿ ಸದಸ್ಯರು ಮಾತನಾಡುತ್ತಾ, 19, 21, 22, 36ನೇ ಕ್ರಾಸ್ ಮತ್ತು 5 ಹಾಗೂ 6ನೇ ಕ್ರಾಸ್‌ನ ತಿರುವಿನಲ್ಲಿ ಇರುವ ಬೀದಿ ದೀಪಗಳು ಇಲ್ಲದೆ ಇರುವುದರಿಂದ ಸಾರ್ವಜನಿಕರಿಗೆ ರಾತ್ರಿಯ ಸಮಯದಲ್ಲಿ ತೊಂದರೆಯಾಗುತ್ತಿರುವುದಾಗಿ ಸಭೆಗೆ ತಿಳಿಸಿದರು. ಇದಕ್ಕೆ ಉತ್ತರವಾಗಿ ಸಭೆಗೆ ಹಾಜರಿದ್ದ ಶ್ರೀ ಸೈಯದ್ ಜಮೀಲ್ , ಕಿರಿಯ ಅಭಿಯಂತರರು, ವಿದ್ಯುತ್ [ಪಶ್ಚಿಮ] ರವರು 15 ದಿನಗಳೊಳಗಾಗಿ ಸದರಿ ರಸ್ತೆಗಳಲ್ಲಿ ಹೊಸದಾಗಿ ಬೀದಿ ದೀಪಗಳನ್ನು ಅಳವಡಿಸುವುದಾಗಿ ಸಭೆಗೆ ತಿಳಿಸಿದರು.



Scanned by CamScanner

6. ಶ್ರೀ ವಿಜಯ್, ಎ.ಎಸ್.ಐ. ರಾಜಾಜಿನಗರ ರವರು ಮಾತನಾಡುತ್ತಾ, ಡಾ: ರಾಜ್‌ಕುಮಾರ್ ರಸ್ತೆಯಲ್ಲಿ ಮರದ ಕೊಂಬೆಗಳು ಒಣಗಿದ್ದು, ಯಾವುದೇ ಸಮಯದಲ್ಲಿ ಬೀಳುವ ಸಂಭವವಿರುವುದರಿಂದ ಅರಣ್ಯ ಇಲಾಖೆಯವರು ಕೂಡಲೇ ಒಣಗಿರುವ ಮರದ ಕೊಂಬೆಗಳನ್ನು ತೆರವುಗೊಳಿಸಬೇಕಾಗಿ ಸಭೆಗೆ ಕೋರಿದರು. ಇದರ ಬಗ್ಗೆ ನೋಡಲ್ ಅಧಿಕಾರಿಗಳು ಮಾತನಾಡುತ್ತಾ, ಈ ವಿಷಯಕ್ಕೆ ಸಂಬಂಧಿಸಿದಂತೆ, ಕ್ರಮವನ್ನು ಕೈಗೊಳ್ಳಲು ಅರಣ್ಯ ಇಲಾಖೆಯವರಿಗೆ ತಿಳಿಸಲು ವಾರ್ಡ್ ಸಮಿತಿ ಕಾರ್ಯದರ್ಶಿರವರಿಗೆ ಸೂಚಿಸಿದರು.

7. ಕಂದಾಯ ಪರಿವೀಕ್ಷಕರು ಮಾತನಾಡುತ್ತಾ, ಕಂದಾಯ ಇಲಾಖೆಗೆ ಸಂಬಂಧಿಸಿದಂತೆ, ಸಕಾಲದ ಅಡಿಯಲ್ಲಿ ಯಾವುದೇ ಕಡತಗಳು ಬಾಕಿ ಇರುವುದಿಲ್ಲವೆಂದು ತಿಳಿಸಿದರು. ಮತ್ತು ಸುಮಾರು ಒಂದು ಕೋಟಿ ಹತ್ತು ಲಕ್ಷ ರೂಗಳು ತೆರಿಗೆ ವಸೂಲಿ ಬಾಕಿ ಇದ್ದು, ಇದರಲ್ಲಿ ಮಾರ್ಚ್ ಅಂತ್ಯದೊಳಗೆ ರೂ. 50.00 ಲಕ್ಷಗಳಷ್ಟು ವಸೂಲಾಗುವ ನಿರೀಕ್ಷೆ ಇರುವುದಾಗಿ ಸಭೆಯಲ್ಲಿ ತಿಳಿಸಿದರು.

8. ಆಹಾರ ನಿರೀಕ್ಷಕರು ರವರು ಮಾತನಾಡುತ್ತಾ, ಕರ್ನಾಟಕ ಸರ್ಕಾರದ ಆದೇಶದಂತೆ ಒಂದು ಸಾವಿರ ಚ.ಅ. ಮನೆ, 4 ಚಕ್ರದ ವಾಹನ ಮತ್ತು ತಿಂಗಳಿಗೆ 15000/- ಪಡೆಯುವ ಕುಟುಂಬದವರು ಬಿ.ಪಿ.ಎಲ್. ಕಾರ್ಡ್ ಪಡೆಯಲು ಅನರ್ಹರಾಗಿರುತ್ತಾರೆ. ಆದುದರಿಂದ ವಾರ್ಡ್ ವ್ಯಾಪ್ತಿಯಲ್ಲಿ ಇಂತಹ ಸೌಲಭ್ಯವುಳ್ಳ ಕುಟುಂಬದವರು ಬಿ.ಪಿ.ಎಲ್. ಕಾರ್ಡ್ ಪಡೆದಿದ್ದಲ್ಲಿ, ಹಿಂದಿರುಗಿಸಲು ವಾರ್ಡ್ ಕಮಿಟಿ ಸದಸ್ಯರು ವಾರ್ಡಿನಲ್ಲಿ ಜಾಗೃತಿ ಮೂಡಿಸಬೇಕಾಗಿ ಕೋರಿದರು.

9. ವಾರ್ಡ್ ಕಮಿಟಿ ಸದಸ್ಯರು ಮಾತನಾಡುತ್ತಾ, ಹಿರಿಯ ನಾಗರೀಕರಿಗೆ ಪಿಂಚಣಿ ಸೌಲಭ್ಯವು ಸರಿಯಾಗಿ ಬರುತ್ತಿರುವುದಿಲ್ಲವೆಂದು ಸಭೆಯಲ್ಲಿ ತಿಳಿಸಿದರು. ಇದಕ್ಕೆ ಉತ್ತರವಾಗಿ ಉಪ ತಹಶೀಲ್ದಾರ್ ಕಛೇರಿಯಿಂದ ಹಾಜರಿದ್ದ ಶ್ರೀ ಪರಮೇಶ್, ವಿಲೇಜ್ ಅಕೌಂಟೆಂಟ್ ರವರು ಇತ್ತೀಚಿನ ದಿನಗಳಲ್ಲಿ ಬ್ಯಾಂಕ್‌ಗಳು ವಿಲೀನಗೊಂಡಿರುವುದರಿಂದ 2 ತಿಂಗಳುಗಳಿಂದ ತೊಂದರೆಯಾಗುತ್ತಿರುವುದಾಗಿ ಸಭೆಯಲ್ಲಿ ತಿಳಿಸಿದರು.

10. ಪಾಲಿಕೆಯ ಆಯವ್ಯಯದ ಬಗ್ಗೆ ಸಭೆಯಲ್ಲಿ ಚರ್ಚಿಸಲಾಗಿ ಕಳೆದ ಸಾಲಿನ Spill Over ಕಾಮಗಾರಿಗಳನ್ನು ಮುಂದುವರೆಸಲು ಹಾಗೂ ವಾರ್ಡಿನಲ್ಲಿ ಹದಗೆಟ್ಟಿರುವ ರಸ್ತೆಗಳನ್ನು ಡಾಂಬರೀಕರಣ ಮಾಡುವುದು, ಚರಂಡಿ ಮತ್ತು ಪಾದಚಾರಿ ಮಾರ್ಗವನ್ನು ಅಭಿವೃದ್ಧಿ ಪಡಿಸುವುದು, ಬಿ.ಬಿ.ಎಂ.ಪಿ. ವಾರ್ಡ್ ಕಛೇರಿಯ ಕಾಮಗಾರಿಯನ್ನು ಮುಂದುವರೆಸುವುದು, ರಾಜ್ ಕುಮಾರ್ ಕಲಾಕ್ಷೇತ್ರವನ್ನು ಅಭಿವೃದ್ಧಿ ಮಾಡುವುದು, ನಾಡೀಗರ್ ಕಾಲೇಜ್ ಪಕ್ಕದಲ್ಲಿರುವ ಆಟದ ಮೈದಾನವನ್ನು ಅಭಿವೃದ್ಧಿಪಡಿಸುವುದು, ವಾರ್ಡ್ ವ್ಯಾಪ್ತಿಯಲ್ಲಿ ಮಳೇ ನೀರು ಇಂಗು ಗುಂಡಿಯನ್ನು ನಿರ್ಮಾಣ ಮಾಡುವುದು, ಇಂದಿರಾನಗರ ವ್ಯಾಪ್ತಿಯಲ್ಲಿ ಬರುವ ಅಂಗನವಾಡಿ ಕಟ್ಟಡಗಳನ್ನು ಅಭಿವೃದ್ಧಿ, ಮಾಡುವುದು, ಪಾಲಿಕೆಯ ಖಾಲಿ ಜಾಗ ಹಾಗೂ ಪಾರ್ಕ್ ಗಳಿಗೆ ಕಾಂಪೌಂಡ್ ಅಳವಡಿಸುವ ಕಾಮಗಾರಿಯನ್ನು ಕೈಗೆತ್ತಿಕೊಳ್ಳುವುದು ಮತ್ತು 1ನೇ ಮುಖ್ಯ ರಸ್ತೆ, ಮಂಜುನಾಥನಗರದಲ್ಲಿರುವ ಪಾಲಿಕೆಯ ಆಸ್ಪತ್ರೆಯನ್ನು ಅಭಿವೃದ್ಧಿ ಪಡಿಸಲು ಆಯವ್ಯಯದಲ್ಲಿ ಸೇರಿಸಲು ಕ್ರಮ ಕೈಗೊಳ್ಳಬೇಕೆಂದು ಸಭೆಯಲ್ಲಿ ತೀರ್ಮಾನಿಸಲಾಯಿತು.

ಸದಸ್ಯ ಕಾರ್ಯದರ್ಶಿಗಳು ಸಭೆಯಲ್ಲಿ ಹಾಜರಿದ್ದ ಮಾನ್ಯ ಅಧ್ಯಕ್ಷರಿಗೆ ವಾರ್ಡ್ ಸಮಿತಿ ಸದಸ್ಯರುಗಳಿಗೆ ಮತ್ತು ವಿವಿಧ ಇಲಾಖೆಯ ಅಧಿಕಾರಿಗಳಿಗೆ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಸದಸ್ಯ ಕಾರ್ಯದರ್ಶಿ
ವಾರ್ಡ್ ಸಮಿತಿ
ವಾರ್ಡ್ ನಂ. 99

ನೋಡಲ್ ಅಧಿಕಾರಿಗಳು
ವಾರ್ಡ್ ನಂ. 99

Scanned by CamScanner